Bangalore
Regional News
20.08.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ಲೋಕಸಭೆಯಲ್ಲಿಂದು ಆನ್ ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ಮಂಡಿಸಿದ ಸಚಿವ ಅಶ್ವಿನಿ ವೈಷ್ಣವ್
2. ಇಂದು ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜು ಅರಸು ೧೧೦ನೇ ಜನ್ಮದಿನ; ಹಿರಿಯ ಪತ್ರಕರ್ತ ಕಲ್ಲೇ ಶಿವೋತ್ತಮರಾವ್ ಅವರಿಗೆ ಪ್ರಶಸ್ತಿ ಪ್ರದಾನ
3. ಅರಣ್ಯ ಕೈಗಾರಿಕಾ ನಿಗಮದ ಇ-ಕಾಮರ್ಸ್ ತಾಣಕ್ಕೆ ಸಚಿವ ಈಶ್ವರ ಖಂಡ್ರೆ ಚಾಲನೆ
4. ರಾಜ್ಯವನ್ನು ಸರ್ಕಾರ ಸಾಲದ ಸುಳಿಗೆ ತಳ್ಳುತ್ತಿದೆ - ಪ್ರತಿಪಕ್ಷ ನಾಯಕ ಆರ್ ಅಶೋಕ ಗಂಭೀರ ಆರೋಪ
5. ರಾಜ್ಯದ ಹಲವೆಡೆ ಧಾರಾಕಾರ ಮಳೆ; ಶ್ರೀರಂಗಪಟ್ಟಣದಲ್ಲಿ ಪ್ರವಾಹ ಭೀತಿ; ಉತ್ತರಕರ್ನಾಟಕದ ಜಲಾಶಯಗಳಲ್ಲಿ ನೀರಿನ ಮಟ್ಟ ಏರಿಕೆ

*******

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಆನ್ ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ೨೦೨೫ ಅನ್ನು ಲೋಕಸಭೆಯಲ್ಲಿ ಇಂದು ಮಂಡಿಸಿದರು. ಮೀಸಲಾದ ಪ್ರಾಧಿಕಾರದೊಂದಿಗೆ ಇ-ಕ್ರೀಡೆಗಳನ್ನು ಉತ್ತೇಜಿಸಲು ಮತ್ತು ಆನ್‌ಲೈನ್ ಹಣದ ಆಟಗಳನ್ನು ನಿಯಂತ್ರಿಸಲು ಗುರಿಯನ್ನು ಈ ಮಸೂದೆ ಹೊಂದಿದೆ. ಯುವಕರು ಮತ್ತು ದುರ್ಬಲ ಜನಸಂಖ್ಯೆಯನ್ನು ರಕ್ಷಿಸುವುದು, ಸಾರ್ವಜನಿಕ ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವುದು ಮತ್ತು ಹಣಕಾಸು ವ್ಯವಸ್ಥೆಗಳ ಸಮಗ್ರತೆ ಮತ್ತು ರಾಷ್ಟ್ರೀಯ ಸಾರ್ವಭೌಮತ್ವವನ್ನು ರಕ್ಷಿಸುವುದನ್ನು ಈ ಮಸೂದೆಯಲ್ಲಿ ಒತ್ತಿ ಹೇಳಲಾಗಿದೆ.

*******

ಇಂದು ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ೧೧೦ನೇ ಜನ್ಮ ದಿನಾಚರಣೆ. ಈ ಹಿನ್ನೆಲೆಯಲ್ಲಿ ವಿಧಾನಸೌಧದ ಪಶ್ಚಿಮ ದ್ವಾರದ ಬಳಿ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಪರಿಶಿಷ್ಟರ, ಬಡವರ ಹಾಗೂ ಹಿಂದುಳಿದ ವರ್ಗಗಳ ಉದ್ಧಾರಕ್ಕಾಗಿ ಶ್ರಮಿಸಿದ ಅರಸು ಅವರು ಸಾಮಾಜಿಕ ಹರಿಕಾರ ಎಂದು ಬಣ್ಣಿಸಿದರು.

ಇದೇ ವೇಳೆ ಹಿರಿಯ ಪತ್ರಕರ್ತ ಕಲ್ಲೇ ಶಿವೋತ್ತಮರಾವ್ ಅವರಿಗೆ ಈ ಸಾಲಿನ ಅರಸು ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಈ ವೇಳೆ, ಸಚಿವ ಕೆ.ಎಚ್. ಮುನಿಯಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ, ಸಚಿವ ಶಿವರಾಜ್ ಎಸ್.ತಂಗಡಗಿ ಸೇರಿದಂತೆ ಇತರೆ ಸಚಿವರು ಉಪಸ್ಥಿತರಿದ್ದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ ಚಾರಿತ್ರಿಕ ಛಾಯಾಚಿತ್ರ ಪ್ರದರ್ಶನ ಉದ್ಘಾಟಿಸಿದರು. ದೇವರಾಜು ಅರಸು ತೋರಿಸಿಕೊಟ್ಟ ದಾರಿ ಎಲ್ಲರಿಗೂ ಮಾದರಿಯಾಗಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಉಳುವವನೇ ಭೂ ಒಡೆಯ, ಮೀಸಲಾತಿ, ನಿರುದ್ಯೋಗಿಗಳಿಗೆ ಸಹಾಯಧನ, ಹೆಣ್ಣು ಮಕ್ಕಳಿಗೆ ಶಿಕ್ಷಣ, ವಿದ್ಯಾರ್ಥಿನಿಲಯಗಳ ಸ್ಥಾಪನೆಯಂತಹ ಹತ್ತು ಹಲವಾರು ಕಾರ್ಯಕ್ರಮಗಳ ಮೂಲಕ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಯ ಹರಿಕಾರರಾಗಿದ್ದರು ಎಂದು ಬಣ್ಣಿಸಿದರು. ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ.ದೇವರಾಜ ಅರಸು ಅವರು ಬಡವರ ಬಗ್ಗೆ ಚಿಂತನೆ ಹೊಂದಿದ್ದರು ಎಂದು ಕೊಪ್ಪಳ ಜಿಲ್ಲೆಯ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರಡ್ಡಿ ಶ್ರೀನಿವಾಸ ಹೇಳಿದ್ದಾರೆ. ಹಾಸನದಲ್ಲಿ ದೇವರಾಜ ಅರಸು ಅವರ ಜನ್ಮ ದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಇಂದು ಬೆಳಗ್ಗೆ ಆಯೋಜಿಸಿದ್ದ ಮೆರವಣಿಗೆಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮ ಚಾಲನೆ ನೀಡಿದರು.

*******

ಕರ್ನಾಟಕ ರಾಜ್ಯ ಕೈಗಾರಿಕಾ ನಿಗಮ ನಿಯಮಿತದ ಇ-ಕಾಮರ್ಸ್ ಅಂತರ್ಜಾಲ ತಾಣಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಕಂಪನಿಗಳ ಕಾಯಿದೆಯಡಿ ೧೯೭೩ರಲ್ಲಿ ಸ್ಥಾಪನೆಯಾದ ಕೆಎಸ್‌ಎಫ್‌ಐಸಿ ಗುಣಮಟ್ಟದ ಪೀಠೋಪಕರಣ, ಬಾಗಿಲು, ಕಿಟಕಿ ಇತ್ಯಾದಿಗಳನ್ನು ಸಿದ್ಧಪಡಿಸಿ ಸರ್ಕಾರಿ ಕಟ್ಟಡ ಹಾಗೂ ಸಾರ್ವಜನಿಕರಿಗೆ ಮಾರಾಟ ಮಾಡಲಿದೆ ಎಂದು ತಿಳಿಸಿದರು. ಇಂದಿನ ಅಗತ್ಯಕ್ಕೆ ಅನುಗುಣವಾಗಿ ಇ-ಕಾಮರ್ಸ್ ಅಂತರ್ಜಾಲ ತಾಣ ಸಿದ್ಧಪಡಿಸಲಾಗಿದೆ. ಸರ್ಕಾರಿ ಶಾಲೆಗಳಿಗೆ ಮೇಜು, ಕುರ್ಚಿ, ಬೆಂಚು ಮತ್ತು ಡೆಸ್ಕ್ ಗಳನ್ನು ಪೂರೈಕೆ ಮಾಡುವ ಕೆ.ಎಸ್.ಎಫ್.ಐ.ಸಿ. ಈಗ **www.ksficfurniture.com** ಡಿಜಿಟಲ್ ವಹಿವಾಟಿನ ವಿಸ್ತರಣೆಯೊಂದಿಗೆ ಇನ್ನೂ ಹೆಚ್ಚು ಜನರನ್ನು ತಲುಪಲಿದೆ ಎಂದು ಸಚಿವ ಈಶ್ವರ್ ಖಂಡ್ರೆ ಹೇಳಿದರು.

*******

ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ ಹಲವು ವಿಧೇಯಕಗಳನ್ನು ಯಥಾವತ್ತಾಗಿ ವಿಧಾನಪರಿಷತ್‌ನಲ್ಲಿಂದು ಮಂಡನೆ ಮಾಡಲಾಯಿತು. ಕಲಾಪ ಪ್ರಾರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ ವಿಧೇಯಕಗಳನ್ನು ಸದನವು ಅಂಗೀಕರಿಸಬೇಕೆಂದು ಸದಸ್ಯರಿಗೆ ಮನವಿ ಮಾಡಿದರು. ವಿಧೇಯಕದ ಮೇಲೆ ಹಲವು ಸದಸ್ಯರು ಚರ್ಚಿಸಿ ಸರ್ಕಾರಕ್ಕೆ ಕೆಲವು ಸಲಹೆಗಳನ್ನು ನೀಡಿದರು. ಮೊದಲು ವಿಧಾನಪರಿಷತ್ ಕಾರ್ಯದರ್ಶಿಯವರಿಗೂ ಸಭಾಪತಿ ವಿಧಾನಸಭೆಯಲ್ಲಿ ಮಂಡನೆಯಾಗಿದ್ದ ಸಿಎಜಿ ವರದಿಯನ್ನು ಮಂಡಿಸುವಂತೆ ಸೂಚನೆ ನೀಡಿದರು. ಕಾರ್ಯದರ್ಶಿಗಳು ವರದಿ ಮಂಡನೆ ಮಾಡಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪರವಾಗಿ ಸಭಾನಾಯಕ ಬೋಸರಾಜು ಅವರು, ಭಾರತದ ಲೆಕ್ಕ ನಿಯಂತ್ರಣಾಧಿಕಾರ ಮತ್ತು ಮಹಾಲೆಕ್ಕ ಪರಿಶೋಧಕರ ವರದಿಯನ್ನು ಸದನದಲ್ಲಿ ಮಂಡನೆ ಮಾಡಿದರು.ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪರವಾಗಿ ಸಭಾನಾಯಕ ಭೋಸರಾಜು ಬೃಹತ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ-೨೦೨೫ನ್ನು ಮಂಡಿಸಿದರು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಪರವಾಗಿ ಕರ್ನಾಟಕ ರಾಜ್ಯ ವಿಶ್ವ ವಿದ್ಯಾನಿಲಯ ವಿಧೇಯಕ, ಕಾರ್ಮಿಕ ಸಚಿವ ಸಂತೋಷ್ ಲಾಡ್ ಪರವಾಗಿ ಕರ್ನಾಟಕ ವೇದಿಕೆ ಆಧರಿತ ಗಿಗ್ ಕಾರ್ಮಿಕರ ವಿಧೇಯಕ-೨೦೨೫ ಮಂಡನೆ ಮಾಡಿದರು. ಕೆರೆಗಳ ವಿಸ್ತೀರ್ಣ ಆಧರಿಸಿ ಬಫರ್‌ಜೋನ್ ನಿಗದಿಪಡಿಸಿರುವ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರವನ್ನು ಸಣ್ಣ ನೀರಾವರಿ ಸಚಿವರಾಗಿರುವ ಬೋಸರಾಜು ಮಂಡಿಸಿದರು. ವಿಧೇಯಕದ ಸದಸ್ಯರಾದ ಐ.ಎನ್.ಡಿಸೋಜ, ಟಿ.ಎ.ಶರವಣ, ಕೆ.ಎಸ್.ನವೀನ್ ಸೇರಿದಂತೆ ಹಲವು ಸದಸ್ಯರು ಮಾತನಾಡಿದರು. ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಕೆರೆಗಳನ್ನು ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಪಕ್ಷಬೇಧ ಮರೆತು ಸದಸ್ಯರು ವಿಧಾನಪರಿಷತ್‌ನಲ್ಲಿ ಆಗ್ರಹಿಸಿದರು.

*******

ರಾಜ್ಯ ಸರ್ಕಾರ ಕರ್ನಾಟಕವನ್ನು ದಿವಾಳಿತನ ಮತ್ತು ಸಾಲದ ಸುಳಿಗೆ ತಳ್ಳುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ೨೦೨೨-೨೩ರಲ್ಲಿ ವಿತ್ತೀಯ ಕೊರತೆಯಲ್ಲಿ ಭಾರೀ ಏರಿಕೆಯಾಗಿದೆ. ಸಾಲದ ಕುಣಿಕೆ ಬಿಗಿಯಾಗಿದೆ. ಮೂಲಸೌಕರ್ಯ ಹೂಡಿಕೆ ಕುಸಿತವಾಗಿದ್ದು, ಅವೈಜ್ಞಾನಿಕ ಗ್ಯಾರಂಟಿಗಳಿಂದ ರಾಜ್ಯದ ಅಭಿವೃದ್ಧಿ ಕುಂಠಿತವಾಗಿದೆ ಎಂದು ದೂರಿದ್ದಾರೆ.

ವಿತ್ತೀಯ ಕೊರತೆಯನ್ನು ತಕ್ಷಣ ನಿಯಂತ್ರಿಸದಿದ್ದರೆ, ರಾಜ್ಯದ ಆರ್ಥಿಕತೆ ಇನ್ನಷ್ಟು ಹಿಂದುಳಿಯಲಿದೆ ಎಂದು ಸಿಎಜಿ ವರದಿಯಲ್ಲಿ ಎಚ್ಚರಿಸಲಾಗಿದೆ ಎಂದು ತಿಳಿಸಿದ್ದಾರೆ.

*******

ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಜಲಾಶಯದಿಂದ ಅಪಾರ ಪ್ರಮಾಣದಲ್ಲಿ ನೀರನ್ನು ನದಿಗೆ ಬಿಡುತ್ತಿರುವುದರಿಂದ ಶ್ರೀರಂಗಪಟ್ಟಣದಲ್ಲಿ ಪ್ರವಾಹ ಭೀತಿ ಎದುರಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಈಗಾಗಲೇ ಶ್ರೀರಂಗಪಟ್ಟಣದ ೧೨೨ ವರ್ಷದ ಹಳೆಯ ಸೇತುವೆಯಾದ ವೆಲ್ಲೆಸ್ಲಿ ಬ್ರಿಡ್ಜ್ ನಲ್ಲಿ ಸಂಚಾರ ನಿರ್ಬಂಧ ಹೊರಡಿಸಿ, ಬ್ಯಾರಿಕೇಡ್ ಅಳವಡಿಸಲಾಗಿದೆ. ಮತ್ತೊಂದೆಡೆ ಶ್ರೀರಂಗಪಟ್ಟಣದ ತಗ್ಗು ಪ್ರದೇಶದ ಮನೆಗಳು, ದೇಗುಲಗಳು ಮುಳುಗಡೆಯಾಗಿದ್ದು, ಅಲ್ಲಿದ್ದ ಜನರನ್ನು ಬೇರೆಡೆಗೆ ಸ್ಥಳಾಂತರ ಮಾಡಲಾಗಿದೆ. ಜೊತೆಗೆ ತಗ್ಗು ಪ್ರದೇಶದ ಕೃಷಿ ಭೂಮಿಗಳು ಜಲಾವೃತ್ತವಾಗಿದೆ. ಶ್ರೀರಂಗಪಟ್ಟಣದ ರಂಗನತಿಟ್ಟು ಪಕ್ಷಿಧಾಮಕ್ಕೆ ಪ್ರವಾಸಿಗರಿಗೆ ನಿರ್ಬಂಧ ಹೇರಲಾಗಿದ್ದು, ದೋಣಿ ವಿಹಾರ ಸ್ಥಗಿತಗೊಂಡಿದೆ. ಭೀಮಾ ಮತ್ತು ಕೃಷ್ಣಾ ಜಲಾನಯನ ಪ್ರದೇಶ ಸೇರಿದಂತೆ ಯಾದಗಿರಿ ಜಿಲ್ಲೆಯಾದ್ಯಂತ ವ್ಯಾಪಕ ಮಳೆ ಸುರಿಯುತ್ತಿದ್ದು, ಎರಡೂ ನದಿಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯದಿಂದ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ೨, ಲಕ್ಷದ ೫೫ ಸಾವಿರ ಕ್ಯೂಸೆಕ್ ನೀರು ಹರಿಸಲಾಗುತ್ತಿದೆ. ನದಿ ಪಾತ್ರದಲ್ಲಿ ಪ್ರವಾಹ ಭೀತಿ ಆವರಿಸಿದೆ. ಯಾದಗಿರಿ ನಗರದ ಭೀಮಾ ನದಿ ದಡದಲ್ಲಿರುವ ಕಂಗಳೇಶ್ವರ ದೇವಸ್ಥಾನವೂ ಸಂಪೂರ್ಣವಾಗಿ ಮಳುಗಡೆಯಾಗಿದೆ. ಘಟ್ಟ ಪ್ರದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿರುವುದರಿಂದ ಉತ್ತರ ಕನ್ನಡದಲ್ಲಿ ಜಲಾಶಯಗಳ ನೀರಿನ ಮಟ್ಟ ಗಣನೀಯವಾಗಿ ಹೆಚ್ಚಾಗುತ್ತಿದೆ. ಜಲಾಶಯಗಳಿಂದ ನೀರು ಹೊರಬಿಟ್ಟಲ್ಲಿ ಕೈಗೊಳ್ಳಬೇಕಾದ ಎಲ್ಲಾ ಅಗತ್ಯ ಮುನ್ನೆಚ್ಚರಿಕೆಗಳನ್ನು ಜಿಲ್ಲಾಡಳಿದಿಂದ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಮಲೆನಾಡು ಭಾಗಗಳಲ್ಲಿ ಮಳೆ ನಿರಂತರವಾಗಿ ಸುರಿಯುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲೆಯ ಆರು ತಾಲುಕುಗಳ ಶಾಲಾ ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ದಾವಣಗೆರೆ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ಸಾರ್ವಜನಿಕರ ಆಸ್ತಿಗೆ ಅಪಾರ ನಷ್ಟ ಉಂಟಾಗಿದೆ. ಹರಿಹರ ಮತ್ತು ಚನ್ನಗಿರಿ ತಾಲೂಕಿನಲ್ಲಿ ೧೦ಕ್ಕೂ ಅಧಿಕ ಮನೆಗಳ ಗೋಡೆಗಳು ಕುಸಿದು ಬಿದ್ದಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ನಿರಂತರ ಮಳೆಯಿಂದಾಗಿ ಜಗಳೂರು ತಾಲ್ಲೂಕಿನ ೫ ಕೆರೆಗಳು ಕೋಡಿ ಬಿದ್ದಿದ್ದು, ಅಪಾರ ಪ್ರಮಾಣ ನೀರು ಹೊರಹೋಗುತ್ತಿದೆ. ಹಾವೇರಿ ಜಿಲ್ಲೆಯಾದ್ಯಂತ ನಿರಂತರ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಮಳೆಯ ಅಬ್ಬರ ಇಂದೂ ಮುಂದುವರೆದಿದ್ದು ಜನ ಜೀವನ ಅಸ್ತವ್ಯಸ್ತಗೊಂಡಿದೆ. ೯ ಸೇತುವೆಗಳು

ಜಲಾವೃತಗೊಂಡಿವೆ. ಪಶ್ಚಿಮ ಘಟ್ಟದ ಪ್ರದೇಶದಲ್ಲಿನ ವ್ಯಾಪಕ ಮಳೆಯಿಂದ ಹಾಗೂ ಮಹಾರಾಷ್ಟ್ರದ ಕೊಯ್ನಾ ಜಲಾಶಯದಿಂದ ೯೦ ಸಾವಿರ ಹಾಗೂ ವಾರಣಾ ಜಲಾಶಯದಿಂದ ೪೦ ಕ್ಯೂಸೆಕ್ ನೀರು ಹರಿಬಿಟ್ಟಿರುವುದರಿಂದ ಕೃಷ್ಣಾ ನದಿ ಸೇರಿದಂತೆ ಅದರ ಉಪ ನದಿಗಳು ಹಾಗೂ ಮಲಪ್ರಭಾ, ಘಟಪ್ರಭಾ ನದಿಗಳು ತುಂಬಿ ಹರಿಯುತ್ತಿವೆ. ಇದರಿಂದಾಗಿ ಪ್ರವಾಹದ ಭೀತಿ ಸೃಷ್ಟಿಯಾಗಿದೆ. ಧಾರವಾಡ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳ ಆರೋಗ್ಯ ಹಾಗೂ ಸುರಕ್ಷತೆ ದೃಷ್ಟಿಯಿಂದ ಇಂದು ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳಿಗೆ, ಪ್ರಾಥಮಿಕ ಶಾಲೆಗಳಿಗೆ, ಪ್ರೌಢಶಾಲೆಗಳಿಗೆ ಮತ್ತು ಪದವಿ ಹಾಗೂ ಪದವಿ ಪೂರ್ವ ಮಹಾವಿದ್ಯಾಲಯಗಳಿಗೆ ಒಂದು ದಿನದ ರಜೆ ಘೋಷಿಸಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶ ಹೊರಡಿಸಿದ್ದಾರೆ. ಮಹಾರಾಷ್ಟ್ರದ ಕೃಷ್ಣಾಕೊಳ್ಳದಲ್ಲಿ ಭಾರೀ ಮಳೆ ಆಗುತ್ತಿರುವುದರಿಂದ ಕೃಷ್ಣಾ ನದಿಯಿಂದ ಹಾಗೂ ಘಟಪ್ರಭಾ ನದಿಯಿಂದ ಅಪಾರ ಪ್ರಮಾಣದ ನೀರನ್ನು ಬಿಡಲಾಗುತ್ತದೆ, ಇದರಿಂದ ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಅಣಕಟ್ಟೆಯ ಒಳಹರಿವೂ ಹೆಚ್ಚಾಗಿದೆ.

***END****